ಡಾ: ವಿ.ಎಸ್. ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು) :-

ಅ) ಹಾಸನ, ಮಂಡ್ಯ ಮತ್ತು ಬೆಳಗಾಂ.

ಆ) 300

ಇ) 2007-08ನೇ ಸಾಲಿನಲ್ಲಿ ಶಿವಮೊಗ್ಗ, ಬೀದರ್ ಮತ್ತು ರಾಯಚೂರುಗಳಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭ ಮಾಡಿ. ಪ್ರತಿ ಕಾಲೇಜಿಗೆ 100 ಸೀಟುಗಳಂತೆ ಪ್ರವೇಶ ನಿಗದಿಪಡಿಸಿ ಭಾರತೀಯ ವೈದ್ಯಕೀಯ ಪರಿಷತ್ತಿನ ಶಿಫಾರಸ್ಸಿನ ಮೇರೆಗೆ ಕೇಂದ್ರ ಸರ್ಕಾರದವರು ದಿನಾಂಕ: 13-07-2007ರಂದು ಅನುಮತಿ ನೀಡಿರುತ್ತಾರೆ. ಅದರಂತೆ ಈ ವೈದ್ಯಕೀಯ ಕಾಲೇಜುಗಳನ್ನು ಈ ವರ್ಷ ಪ್ರಾರಂಭಿಸಲಾಗುವುದು.

683 (1012) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) :- ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಮೇಲ್ದರ್ಜೆಗೇರಿಸಿರುವ ಬಾಗೇಪಲ್ಲಿ ಮತ್ತು ಗುಡಿಬಂಡೆ ಸರ್ಕಾರಿ ಆಸ್ಪತ್ರೆಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಈ ಆಸ್ಪತ್ರೆಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :-

ಅ) 2006-07ನೇ ಸಾಲಿನಲ್ಲಿ ಈ ಆಸ್ಪತ್ರೆಗಳನ್ನು 100 ಹಾಸಿಗೆಗಳ ಆಸ್ಪತ್ರೆಗಳನ್ನಾಗಿ ಮೇಲ್ದರ್ಜೆಗೇರಿಸಿರುವುದರಿಂದ 2007-08ನೇ ಸಾಲಿಗೆ ಅಗತ್ಯವಾದ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕಾಗಿರುತ್ತದೆ.

ಆ) ಇದಕ್ಕೆ ಕಟ್ಟಡದ ಕಾಮಗಾರಿಯನ್ನು 2007-08 ನೇ ಸಾಲಿನಲ್ಲಿ ಕೈಗೊಳ್ಳಲು ಕ್ರಮ ವಹಿಸಲಾಗುತ್ತಿದೆ. ಇದಕ್ಕೆ ಅಗತ್ಯವಾಗಿರುವ ಸಿಬ್ಬಂದಿಗಳನ್ನು ಹಾಗೂ ಉಪಕರಣಗಳನ್ನು ಕಟ್ಟಡ ಕಾಮಗಾರಿ ಮುಗಿದ ನಂತರ ಪೂರೈಸಲು ಕ್ರಮ ಕೈಗೊಳ್ಳಲಾಗುವುದು.

684 (1013) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) :- ಕಾರ್ಮಿಕ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಬಾಗೇಪಲ್ಲಿಯ ಸರ್ಕಾರಿ ಐಟಿಐ ಗೆ ಸ್ವಂತ ಕಟ್ಟಡ ಇಲ್ಲದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;